## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1256
ಮಾನ್ಯ ಸದಸ್ಯರ ಹೆಸರು : ಶ್ರೀ ಶಿವಕುಮಾರ್ ಕೆ
ಉತ್ತರಿಸುವ ದಿನಾಂಕ : 13-03-2026
ಉತ್ತರಿಸುವ ಸಚಿವರು : ಸಮಾಜ ಕಲ್ಯಾಣ ಸಚಿವರು

| ಕ್ರ. ಸಂ. | ವಿಷಯ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಪರಿಶಿಷ್ಟ ಜಾತಿಗಳಿಗೆ 6:6:5 ರ ಅನುಪಾತದಲ್ಲಿ ಒಳಮೀಸಲಾತಿ ಜಾರಿಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; ಇದಕ್ಕೆ ಸಂಬಂಧಿಸಿದ ವಿಧೇಯಕದ ಪ್ರಸ್ತುತ ಹಂತವೇನು; | ಮಾನ್ಯ ಸರ್ವೋಚ್ಚ ನ್ಯಾಯಾಲಯವು ಸಿವಿಲ್ ಅಪೀಲ್ ಸಂ:2317/2011 ರಲ್ಲಿ ದಿನಾಂಕ:01-08-2024 ರಂದು ನೀಡಿರುವ ತೀರ್ಪಿನ ಅನ್ವಯ ಸರ್ಕಾರದ ಆದೇಶಗಳ ದಿನಾಂಕ:12-11-2024 ಮತ್ತು ದಿನಾಂಕ:-03-12-2024 ರಲ್ಲಿ ಕರ್ನಾಟಕ ರಾಜ್ಯದಲ್ಲಿ ಪರಿಶಿಷ್ಟ ಜಾತಿಗಳ ಒಳಮೀಸಲಾತಿ (ವರ್ಗೀಕರಣ) ಬಗ್ಗೆ ಅಧ್ಯಯನ ನಡೆಸಿ ವರದಿ ಸಲ್ಲಿಸಲು ನಿವೃತ್ತ ನ್ಯಾಯಮೂರ್ತಿ ಡಾ\|\| ಹೆಚ್.ಎನ್ ನಾಗಮೋಹನ್ ದಾಸ್ ಇವರ ನೇತೃತ್ವದಲ್ಲಿ ಏಕ ಸದಸ್ಯ ಆಯೋಗವನ್ನು ರಚಿಸಿ ಆದೇಶಿಸಲಾಗಿದೆ.<br><br>ಅದರಂತೆ ಆಯೋಗವು ದಿನಾಂಕ:04-08-2025 ರಂದು ಸರ್ಕಾರಕ್ಕೆ ವರದಿಯನ್ನು ಸಲ್ಲಿಸಿದ್ದು, ಸರ್ಕಾರವು ಸದರಿ ಆಯೋಗದ ವರದಿಯನ್ನು ಕೂಲಂಕುಶವಾಗಿ ಚರ್ಚಿಸಿ ಕೆಲವು ಮಾರ್ಪಾಡುಗಳೊಂದಿಗೆ ಸಚಿವ ಸಂಪುಟವು ಒಪ್ಪಿರುವ ಮೇರೆಗೆ ಸರ್ಕಾರದ ಆದೇಶ ಸಂಖ್ಯೆ:ಸಕಇ 08 ಎಸ್‌ಎಲ್‌ಪಿ 2024, ದಿನಾಂಕ:25-08-2025 ರಲ್ಲಿ 101 ಪರಿಶಿಷ್ಟ ಜಾತಿಗಳನ್ನು ಈ ಕೆಳಕಂಡಂತೆ ಪ್ರವರ್ಗವಾರು ಮೀಸಲಾತಿ ಹಂಚಿಕೆ ಮಾಡಿ ಆದೇಶಿಸಲಾಗಿದೆ.<br><br>ಕ್ರಸಂ / ಸಮುದಾಯಗಳು / ಪ್ರಮಾಣ ಶೇಕಡ<br>1 / ಪ್ರವರ್ಗ-ಎ ರಲ್ಲಿ 16 ಜಾತಿಗಳು / 6<br>2 / ಪ್ರವರ್ಗ-ಬಿ 19 ಜಾತಿಗಳು / 6<br>3 / ಪ್ರವರ್ಗ-ಸಿ 63 ಜಾತಿಗಳು / 5<br>ಒಟ್ಟು / 17<br><br>ಮುಂದುವರೆದು, ಆಯೋಗದ ವರದಿಯಲ್ಲಿನ ಆದಿ ಕರ್ನಾಟಕ, ಆದಿ ದ್ರಾವಿಡ ಮತ್ತು ಆದಿ ಆಂಧ್ರ ಈ 3 ಸಮುದಾಯಗಳು ತಮ್ಮ ಮೂಲ ಜಾತಿಯನ್ನು ತಿಳಿಸದೇ ಇರುವುದರಿಂದ ಸದರಿ 3 ಜಾತಿಗಳು ಅನುಬಂಧಗಳಲ್ಲಿರುವ ಪ್ರವರ್ಗ-ಎ ಅಥವಾ ಪ್ರವರ್ಗ-ಬಿ ಗಳಲ್ಲಿ ಮೀಸಲಾತಿ ಸೌಲಭ್ಯವನ್ನು ಪಡೆಯಬಹುದು ಎಂದು ಆದೇಶಿಸಲಾಗಿದೆ. |

Nested table within the answer:

| ಕ್ರಸಂ | ಸಮುದಾಯಗಳು | ಪ್ರಮಾಣ ಶೇಕಡ |
|---|---|---|
| 1 | ಪ್ರವರ್ಗ-ಎ ರಲ್ಲಿ 16 ಜಾತಿಗಳು | 6 |
| 2 | ಪ್ರವರ್ಗ-ಬಿ 19 ಜಾತಿಗಳು | 6 |
| 3 | ಪ್ರವರ್ಗ-ಸಿ 63 ಜಾತಿಗಳು | 5 |
| ಒಟ್ಟು | | 17 |

| | | |
|---|---|---|
| | | ಪ್ರಸುತ್ತ ಒಳಮೀಸಲಾತಿಯ ಕುರಿತ ಪ್ರಕರಣವು ಮಾನ್ಯ ಉಚ್ಚ ನ್ಯಾಯಾಲಯ ಇಲ್ಲಿ WP No 28612/2025 ರ ಪ್ರಕರಣವು ದಾಖಲಾಗಿದ್ದು, ಪ್ರಸ್ತುತ ವಿಚಾರಣೆ ಹಂತದಲ್ಲಿರುತ್ತದೆ. |
| ಆ) | ಒಳಮೀಸಲಾತಿ ಜಾರಿಯ ನಂತರ ಸಮುದಾಯಗಳ ಸ್ಥಿತಿಗತಿಗಳನ್ನು ಕಾಲಕಾಲಕ್ಕೆ ಪರಿಶೀಲಿಸಲು "ಪರಿಶಿಷ್ಟ ಜಾತಿಗಳ ಶಾಶ್ವತ ಆಯೋಗ" ರಚಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಇದ್ದಲ್ಲಿ, ಈ ಆಯೋಗವನ್ನು ಎಷ್ಟು ಕಾಲಮಿತಿಯೊಳಗೆ ರಚಿಸಲಾಗುವುದು; | ಈ ಬಗ್ಗೆ ಕರ್ನಾಟಕ ರಾಜ್ಯಪತ್ರ ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಸಚಿವಾಲಯ ಅಧಿಸೂಚನೆ ಸಂಖ್ಯೆ:ಸಂವ್ಯಶಾಇ 101ಶಾಸನ 2025, ದಿನಾಂಕ:08.01.2026 ರಲ್ಲಿ ಕರ್ನಾಟಕ ರಾಜ್ಯ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ ಆಯೋಗ (ತಿದ್ದುಪಡಿ) ಅಧಿನಿಯಮ, 2025 ರಂದು ಆದೇಶ ಹೊರಡಿಸಲಾಗಿರುತ್ತದೆ. |
| ಇ) | ಈ ಆಯೋಗದ ಅಧ್ಯಕ್ಷರು ಮತ್ತು ಸದಸ್ಯರ ನೇಮಕಾತಿಗೆ ನಿಗದಿಪಡಿಸಲಾದ ಮಾನದಂಡಗಳೇನು; ಆಯೋಗದಲ್ಲಿ ಪರಿಶಿಷ್ಟ ಜಾತಿಯ ವಿವಿಧ ಒಳಪಂಗಡಗಳಿಗೆ (ಎಡಗೈ, ಬಲಗೈ ಹಾಗೂ ಸ್ಪೃಶ್ಯ ಸಮುದಾಯಗಳು) ಸಮಾನ ಪ್ರಾತಿನಿಧ್ಯ ನೀಡಲಾಗುವುದೇ. | ಕರ್ನಾಟಕ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಆಯೋಗದ ಅಧ್ಯಕ್ಷರು ಮತ್ತು ಸದಸ್ಯರ ನೇಮಕಾತಿಗೆ ಸಂಬಂಧಿಸಿದಂತೆ ಈ ಕೆಳಕಂಡ ಮಾನ ದಂಡಗಳಿರುತ್ತವೆ.<br>1. ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳಿಗೆ ಸಂಬಂಧಿಸಿದ ವಿಷಯಗಳಲ್ಲಿ ವಿಶೇಷ ಜ್ಞಾನವುಳ್ಳ ಒಬ್ಬ ಅಧ್ಯಕ್ಷರು.<br>2. ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳಿಗೆ ಸಂಬಂಧಿಸಿದ ವಿಷಯಗಳ ಬಗ್ಗೆ ವಿಶೇಷ ಜ್ಞಾನವುಳ್ಳ ಇಬ್ಬರು ವ್ಯಕ್ತಿಗಳು. |
| ಈ) | ಈ ಆಯೋಗಕ್ಕೆ ಇರುವ ಅಧಿಕಾರಗಳೇನು ಮತ್ತು ಇದು ಸಲ್ಲಿಸುವ ವರದಿಗಳು ಸರ್ಕಾರದ ಮೇಲೆ ಕಡ್ಡಾಯವಾಗಿ ಜಾರಿಯಾಗುವಂತೆ ಕಾನೂನು ಚೌಕಟ್ಟು ರೂಪಿಸಲಾಗಿದೆಯೇ. | ಪರಿಶಿಷ್ಟ ಜಾತಿಗಳು, ಪರಿಶಿಷ್ಟ ಪಂಗಡಗಳ ಕರ್ನಾಟಕ ರಾಜ್ಯ ಆಯೋಗ ಕಾಯ್ದೆಯ ಪ್ರಕಾರ ಸರ್ಕಾರಕ್ಕೆ ಶಿಫಾರಸ್ಸು ಮಾಡುವುದಕ್ಕೆ ಅಧಿಕಾರವಿರುತ್ತದೆ. |

**ಸಕಇ 256 ಪಕವಿ 2026**

**(ಡಾ: ಹೆಚ್.ಸಿ.ಮಹದೇವಪ್ಪ)**
**ಸಮಾಜ ಕಲ್ಯಾಣ ಸಚಿವರು**